

# ಮೇಘಾ ಜೊತೆಯಲಿ...

‘ಗ್ರಾಮಾಯಣ’ ಹಾಗೂ ‘After ಆಪರೇಷನ್ ಲಂಡನ್ CAFE’ ಸಿನಿಮಾಗಳ ಬಿಡುಗಡೆಯನ್ನು ಎದುರು ನೋಡುತ್ತಿರುವ ನಟಿ ಮೇಘಾ ಶೆಟ್ಟಿ ಇದೀಗ ಮಹಿಳಾ ಪ್ರಧಾನ ಸಿನಿಮಾದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ.

ಎಸ್. ಮಹೇಂದರ್ ಈ ಸಿನಿಮಾ ಕಥೆ ಸಿದ್ಧಪಡಿಸಿದ್ದು, ಈ ಸಂಬಂಧ ಮೇಘಾ ಶೆಟ್ಟಿ ಜೊತೆಗೆ ಮಾತುಕತೆ ನಡೆಯುತ್ತಿರುವುದಾಗಿ ತಿಳಿದುಬಂದಿದೆ. ‘ಸಂಜು ವೆಡ್ಸ್ ಗೀತಾ 2’ ಸಿನಿಮಾ ಖ್ಯಾತಿಯ ನಿರ್ಮಾಪಕ ಚಲವಾದಿ ಕುಮಾರ್ ಈ ಸಿನಿಮಾ ನಿರ್ಮಾಣದಲ್ಲಿ ತೊಡಗಿಕೊಂಡಿದ್ದಾರೆ. ಕೌಟುಂಬಿಕ ಹಾಗೂ ಮಹಿಳಾ ಕೇಂದ್ರಿತ ಸಿನಿಮಾಗಳಿಗೆ ಹೆಸರಾಗಿದ್ದ ನಿರ್ದೇಶಕ ಮಹೇಂದರ್ ಸಮಾಜದ ವಾಸ್ತವಿಕತೆಗೆ ತಕ್ಕಂತೆ ಈ ಸ್ಕ್ರಿಪ್ಟ್ ರೂಪಿಸುತ್ತಿರುವುದಾಗಿ ತಿಳಿದುಬಂದಿದೆ.

ನೈಜ ಘಟನೆಯಾಧಾರಿತ ಸಿನಿಮಾ ಇದಾಗಿದ್ದು, ಬಹುಭಾಷೆಗಳಲ್ಲಿ ಸಿನಿಮಾವನ್ನು ಬಿಡುಗಡೆ ಮಾಡುವ ಯೋಜನೆ ರೂಪಿಸಲಾಗಿದೆ.

‘ಜೊತೆಜೊತೆಯಲಿ’ ಧಾರಾವಾಹಿಯಿಂದ ಜನಪ್ರಿಯತೆ ಪಡೆದ ನಟಿ ಮೇಘಾಶೆಟ್ಟಿ ಸಿನಿಮಾರಂಗದಲ್ಲಿ ತಮ್ಮನ್ನು ಸಂಪೂರ್ಣವಾಗಿ ತೊಡಗಿಸಿಕೊಂಡಿದ್ದಾರೆ. ‘ತ್ರಿಬಲ್ ರೈಡಿಂಗ್’, ‘ದಿಲ್‌ಪಸಂದ್’, ‘ಕೈವ’ ಸಿನಿಮಾಗಳ ಮೂಲಕ ಚಂದನವನದಲ್ಲಿ ಸದ್ದು ಮಾಡಿದ್ದಲ್ಲದೆ ತಮಿಳು ಸಿನಿಮಾರಂಗಕ್ಕೂ ಕಾಲಿಟ್ಟಿದ್ದಾರೆ.

ಸದ್ಯ ಅವರ ನಟನೆಯ ಎರಡು ಕನ್ನಡ ಸಿನಿಮಾಗಳು ಬಿಡುಗಡೆಯಾಗಬೇಕಿವೆ. ನಟ ಪ್ರಜ್ವಲ್ ದೇವರಾಜ್ ಅವರೊಂದಿಗೆ ‘ಚೀತಾ’ ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಇದೀಗ ಮಹೇಂದರ್ ನಿರ್ದೇಶನದ ಈ ಸಿನಿಮಾ ಕೂಡ ಅವರ ಲಿಸ್ಟ್ ಸೇರಿದೆ.



# ಐತಿಹಾಸಿಕ ಕಥೆಯಲ್ಲಿ ಶ್ರೀಮುರಳಿ

ಇದೇ ಮೊದಲ ಬಾರಿಗೆ ನಟ ಶ್ರೀಮುರಳಿ ಐತಿಹಾಸಿಕ ಪಾತ್ರವೊಂದರಲ್ಲಿ ಕಾಣಿಸಿಕೊಳ್ಳುತ್ತಿದ್ದು, 500 ವರ್ಷಗಳ ಹಿಂದಿನ ಕಥೆಯೊಂದನ್ನು ಹೇಳಲು ಅಣಿಯಾಗುತ್ತಿದ್ದಾರೆ. ‘ಚಂದ್ರಚಕೋರಿ’, ‘ಉಗ್ರಂ’, ‘ಮಫ್ತಿ’, ‘ಬಘೀರ’ದಂಥ ಸಿನಿಮಾಗಳಲ್ಲಿ ಹಲವು ಗೆಟಪ್‌ಗಳಲ್ಲಿ ಮಿಂಚಿದ್ದ ಶ್ರೀಮುರಳಿ ಈಗ ಐತಿಹಾಸಿಕ ಕಥೆಯ ಅಖಾಡಕ್ಕೆ ಇಳಿಯುತ್ತಿದ್ದಾರೆ.

ಕಳೆದ ವರ್ಷ ಮುರಳಿ ಅಭಿನಯದ ‘ಬಘೀರ’ ಸಿನಿಮಾ ತೆರೆಕಂಡಿತ್ತು. ಈ ವರ್ಷ ಈ ಹೊಸ ಸಿನಿಮಾವನ್ನು ಕೈಗೆತ್ತಿಕೊಂಡಿದ್ದಾರೆ. ಅದಕ್ಕೆ ತಕ್ಕ ತಯಾರಿಯನ್ನೂ ನಡೆಸುತ್ತಿದ್ದಾರೆ. ತಮ್ಮ ಪಾಲಿಗೆ ಇದೊಂದು ಪ್ರಯೋಗಾತ್ಮಕ ಸಿನಿಮಾ, ಪಾತ್ರ ಆಗಿರುವುದಾಗಿಯೂ ಹೇಳಿಕೊಂಡಿದ್ದಾರೆ.

ಇದು ಬಿಗ್ ಬಜೆಟ್ ಸಿನಿಮಾ ಆಗಿದ್ದು, ‘ಕೆಜಿಎಫ್’, ‘ಎಕ್ಕ’, ‘ವೀರಚಂದ್ರಹಾಸ’, ‘ಶಿವ 143’ ಮುಂತಾದ ಸಿನಿಮಾಗಳಲ್ಲಿ ನಟಿಸಿರುವ ಪುನೀತ್ ರುದ್ರನಾಗ್ ಈ ಸಿನಿಮಾ ನಿರ್ದೇಶಿಸುತ್ತಿದ್ದಾರೆ. 500 ವರ್ಷಗಳ ಹಿಂದೆ ನಡೆದ ಕಥೆಯನ್ನು ಪಿರಿಯಾಡಿಕ್ ಆ್ಯಕ್ಷನ್ ಡ್ರಾಮಾ ಆಗಿ ರೂಪಿಸುತ್ತಿರುವುದಾಗಿ ಅವರು ಹೇಳಿದ್ದಾರೆ. ಈ ಮುನ್ನ ಕಾಣಿಸಿಕೊಳ್ಳದಂಥ ವಿಶೇಷ ಪಾತ್ರದಲ್ಲಿ ಶ್ರೀಮುರಳಿ ಕಾಣಿಸಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಪ್ರಿಪ್ರೊಡಕ್ಷನ್ ಕೆಲಸ ಆರಂಭವಾಗಿದ್ದು, ನವೆಂಬರ್‌ನಲ್ಲಿ ಚಿತ್ರೀಕರಣ ಶುರುವಾಗಲಿದೆ. ಸದ್ಯ ‘ಪರಾಕ್’ ಸಿನಿಮಾದಲ್ಲಿಯೂ ಶ್ರೀಮುರಳಿ ಬ್ಯುಸಿಯಾಗಿದ್ದು, ಈ ಸಿನಿಮಾ ಕೂಡ ಮುಂದಿನ ವರ್ಷ ತೆರೆಕಾಣುವ ನಿರೀಕ್ಷೆಯಿದೆ.